**Akashvani : Bangalore**
**National Bulletin In Kannada**
**04.10.2024 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ಜಾಗತಿಕ ಸಮಸ್ಯೆಗಳಿಗೆ ಆದ್ಯಾತ್ಮಿಕತೆಯಿಂದ ಪರಿಹಾರ ಸಾಧ್ಯ- ರಾಷ್ಟ್ರಪತಿ ದ್ರೌಪದಿ ಮುರ್ಮು

೨. ಪಿಎಂ ಕಿಸಾನ್ ಸಮ್ಮಾನ್ ನಿಧಿಯ ೧೮ನೇ ಕಂತಿನ ಹಣ ರೈತರ ಖಾತೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಅವರಿಂದ ನಾಳೆ ಜಮಾವಣೆ

೩. ರೈಲ್ವೆ ಖಾಸಗೀಕರಣ ಇಲ್ಲ; ರಾಜಕೀಯ ಪಕ್ಷಗಳಿಂದ ಅಪಪ್ರಚಾರ- ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

೪. ಹಣಕಾಸಿನ ಶಿಸ್ತು ಕಾಪಾಡಿಕೊಳ್ಳಲು ಕೇಂದ್ರ ಸರ್ಕಾರ ಬದ್ಧ; ವಿತ್ತೀಯ ಕೊರತೆ ಇಳಿಕೆ ಸಾಧ್ಯತೆ- ಸಚಿವೆ ನಿರ್ಮಲಾ ಸೀತಾರಾಮನ್

೫. ಒಂದು ಲಕ್ಷ ಕೋಟಿ ರೂಪಾಯಿ ದಾಟಿದ ದೇಶೀಯ ರಕ್ಷಣಾ ಉತ್ಪನ್ನ ಪ್ರಮಾಣ

<><*<><>*><>

ಆದ್ಯಾತ್ಮಿಕತೆಯಿಂದ ವ್ಯಕ್ತಿಗತ ಬದುಕಿನಲ್ಲಿ ಎದುರಾಗುವ ಸಮಸ್ಯೆಗಳಿಗೆ ಮಾತ್ರ ಪರಿಹಾರ ದೊರಕುವುದಿಲ್ಲ. ಸಮಾಜ ಮತ್ತು ಈ ಜಗತ್ತನ್ನು ಕಾಡುವ ಸಮಸ್ಯೆಗಳಿಗೂ ಪರಿಹಾರ ಕಂಡುಕೊಳ್ಳಲು ಸಾಧ್ಯವಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ರಾಜಸ್ಥಾನದಲ್ಲಿಂದು ಏರ್ಪಡಿಸಿದ್ದ ಸ್ವಚ್ಛ ಮತ್ತು ಆರೋಗ್ಯ ಸಮಾಜ ನಿರ್ಮಾಣಕ್ಕಾಗಿ ಆದ್ಯಾತ್ಮಿಕತೆ ಕುರಿತ ಜಾಗತಿಕ ಶೃಂಗಸಭೆಯ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಈ ಶೃಂಗಸಭೆಯನ್ನು ಮೌಂಟ್ ಅಬು ರಸ್ತೆಯಲ್ಲಿ ಬ್ರಹ್ಮಕುಮಾರಿ ಸಂಸ್ಥಾನ್ ಆಯೋಜಿಸಿದೆ. ಜಗತ್ತಿನ ಹಲವೆಡೆ ಅಶಾಂತಿ ಮನೆ ಮಾಡಿದೆ ಮತ್ತು ಮಾನವೀಯ ಮೌಲ್ಯಗಳು ಕುಸಿಯುತ್ತಿರುವ ಇಂದಿನ ಸಂದರ್ಭದಲ್ಲಿ ಶಾಂತಿ ಮತ್ತು ಐಕ್ಯತೆಯ ಮಹತ್ವ ಹೆಚ್ಚಾಗಿದೆ ಎಂದು ಅಭಿಪ್ರಾಯಪಟ್ಟರು. ಜಾಗತಿಕ ತಾಪಮಾನ ಮತ್ತು ಪರಿಸರ ಮಾಲಿನ್ಯದಿಂದಾಗಿ ವಿಶ್ವದ ಮೇಲೆ ಪ್ರತಿಕೂಲ ಪರಿಣಾಮಗಳು ಉಂಟಾಗುತ್ತಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಆತಂಕ ವ್ಯಕ್ತಪಡಿಸಿದರು. ಇಂತಹ ಕ್ಲಿಷ್ಟಕರ ಸಂದರ್ಭದಲ್ಲಿ ಈ ಸವಾಲುಗಳನ್ನು ಎದುರಿಸಲು ಸಾಧ್ಯವಿರುವಂತಹ ಎಲ್ಲ ಪ್ರಯತ್ನಗಳನ್ನು ಮಾಡುವುದು ನಮ್ಮ ಕರ್ತವ್ಯವಾಗಲಿದೆ. 'ತಾಯಿಯ ಹೆಸರಿನಲ್ಲಿ ಒಂದು ಸಸಿ' ನೆಡಬೇಕು ಎಂಬ ಅಭಿಯಾನದಲ್ಲಿ ಪ್ರತಿಯೊಬ್ಬರು ಭಾಗಿಯಾಗಬೇಕು ಎಂದು ಅವರು ಕರೆ ನೀಡಿದರು.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು, ನಾಳೆ ಮಹಾರಾಷ್ಟ್ರಕ್ಕೆ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಅವರು ವಾಶಿಮ್‌ನಲ್ಲಿ, ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ೧೮ನೇ ಕಂತನ್ನು ಬಿಡುಗಡೆ ಮಾಡಲಿದ್ದಾರೆ. ಇದರಿಂದ ದೇಶದ ೯ ಕೋಟಿ ೪೦ ಲಕ್ಷಕ್ಕೂ ಅಧಿಕ ರೈತರ ಬ್ಯಾಂಕ್ ಖಾತೆಗಳಿಗೆ ಹಣ ನೇರ ವರ್ಗಾವಣೆ ಮೂಲಕ ಜಮೆಯಾಗಲಿದೆ. ೨೦ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತ ಬಿಡುಗಡೆಯಾಗಲಿದೆ. ಇದೇ ವೇಳೆ ಅವರು, ನಮೋ ಶೇತ್‌ಕಾರಿ ಮಹಾ ಸಮ್ಮಾನ್ ನಿಧಿ ಯೋಜನೆಯಡಿ ಐದನೇ ಕಂತಿನಲ್ಲಿ ಮಹಾರಾಷ್ಟ್ರದ ರೈತರಿಗೆ ಹೆಚ್ಚುವರಿಯಾಗಿ ೨ ಸಾವಿರ ಕೋಟಿ ರೂಪಾಯಿಗಳನ್ನು ಬಿಡುಗಡೆಗೊಳಿಸಲಿದ್ದಾರೆ.

<><*<><>*><>

ಯಾವುದೇ ಕಾರಣಕ್ಕೂ ರೈಲ್ವೆಯನ್ನು ಖಾಸಗೀಕರಣ ಮಾಡುವುದಿಲ್ಲ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಸ್ಪಷ್ಟಪಡಿಸಿದ್ದಾರೆ. ಮಹಾರಾಷ್ಟ್ರದ ನಾಸಿಕ್‌ನಲ್ಲಿಂದು ನಡೆದ ರೈಲ್ವೆ ರಕ್ಷಣಾ ಪಡೆಯ ೪೦ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಪಾಲ್ಗೊಂಡು ಪಥಸಂಚಲನವನ್ನು ವೀಕ್ಷಿಸಿ ಅವರು ಮಾತನಾಡಿದರು. ರೈಲ್ವೆ ಎಂದರೆ, ದೇಶದ ಬಡವರು ಮತ್ತು ಮಧ್ಯಮ ವರ್ಗದವರು ಪ್ರಯಾಣಿಸುವ ಸಂಚಾರ ವ್ಯವಸ್ಥೆಯಾಗಿದೆ. ಆದ್ದರಿಂದ ಕೇಂದ್ರ ಸರ್ಕಾರ ರೈಲ್ವೆ ವಲಯದಲ್ಲಿ ಗಣನೀಯ ಬಂಡವಾಳ ಹೂಡಿಕೆಗೆ ಮುಂದಾಗಿದೆ ಎಂದು ತಿಳಿಸಿದರು. ಸಂಶೋಧನೆ, ಸುರಕ್ಷತೆ ಮತ್ತು ಮಾನವ ಸಂಪನ್ಮೂಲ ವೃದ್ಧಿಗೆ ಈ ಬಂಡವಾಳವನ್ನು ಬಳಕೆ ಮಾಡಿಕೊಳ್ಳಲು ಉದ್ದೇಶಿಸಲಾಗಿದೆ ಎಂದರು. ರೈಲ್ವೆಯನ್ನು ಖಾಸಗೀಕರಣ ಮಾಡಲಾಗುವುದು ಎಂದು ಕೆಲವು ರಾಜಕೀಯ ಪಕ್ಷಗಳು ಅಪಪ್ರಚಾರ ಮಾಡುತ್ತಿವೆ. ಆದರೆ ಖಾಸಗೀಕರಣ ಮಾಡುವಂತಹ ಯಾವುದೇ ಉದ್ದೇಶ ಸರ್ಕಾರದ ಮುಂದಿಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು.

<><*<><>*><>

ಆರ್ಥಿಕ ಶಿಸ್ತು ಕಾಪಾಡಿಕೊಳ್ಳಲು ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಒತ್ತಿ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ಕೌಟಿಲ್ಯ ಆರ್ಥಿಕ ಸಮ್ಮೇಳನ-೨೦೨೪ರಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ವಿತ್ತೀಯ ಕೊರತೆ ಪ್ರಮಾಣ ಇಳಿಮುಖವಾಗುವ ಅಂದಾಜಿದ್ದು, ೨೦೨೪ರ ಆರ್ಥಿಕ ವರ್ಷದಲ್ಲಿರುವ ವಿತ್ತೀಯ ಕೊರತೆ ಪ್ರಮಾಣ ಶೇಕಡ ೫.೬ ರಷ್ಟಿದ್ದು, ೨೦೨೫ರ ಹಣಕಾಸು ವರ್ಷದಲ್ಲಿ ಈ ಪ್ರಮಾಣ  ಶೇಕಡ ೪.೯ ಕ್ಕೆ ಕುಸಿಯಲಿದೆ ಎಂದು ಅವರು ಹೇಳಿದರು. ವಿಕಸಿತ ಭಾರತ ಗುರಿ ಸಾಧನೆಯ ಪ್ರಕ್ರಿಯೆಯಲ್ಲಿ ಬಡವರು, ಮಹಿಳೆಯರು, ಯುವಕರು ಮತ್ತು ರೈತರು ಭಾಗಿದಾರರಾಗಿರುತ್ತಾರೆ. ೨೦೪೭ ಕ್ಕೆ  ವಿಕಸಿತ ಭಾರತ ಗುರಿ ಸಾಧನೆಯಿಂದ ಭಾರತಿಯರಷ್ಟೆ ಸಮೃದ್ಧಿ ಕಾಣದೇ, ಇಡೀ ವಿಶ್ವದ ಮೇಲೆ ಇದರ ಪರಿಣಾಮ ಬೀರಲಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಆರ್ಥಿಕ ಪ್ರಗತಿಯ ಜೊತೆಗೆ ಜನರ ಕಲ್ಯಾಣವನ್ನು ಖಾತರಿಪಡಿಸಲು ಜಗತ್ತಿನಲ್ಲಿ ಯಾವುದಾದರೂ ಮಾದರಿ ಇದ್ದರೆ ಅದು ಸಹಕಾರಿ ಮಾದರಿ ಎಂದು ಕೇಂದ್ರ ಗೃಹ ಹಾಗೂ ಸಹಕಾರ ಸಚಿವ ಅಮಿತ್ ಶಾ ಹೇಳಿದ್ದಾರೆ. ಗುಜರಾತ್‌ನ ಗಾಂಧಿನಗರದ ಮಹಾತ್ಮ ಮಂದಿರದಲ್ಲಿ ಏರ್ಪಡಿಸಿದ್ದ ಅಹಮದಾಬಾದ್ ಜಿಲ್ಲಾ ಸಹಕಾರಿ ಬ್ಯಾಂಕ್‌ನ ಶತಮಾನೋತ್ಸವ ಸಮಾರಂಭದಲ್ಲಿ ಅವರು ಮಾತನಾಡಿದರು. ಜನರ ಕಲ್ಯಾಣವನ್ನು ಖಾತರಿಪಡಿಸದ ಹೊರತು, ಯಾವುದೇ ದೇಶ ಆರ್ಥಿಕ ಪ್ರಗತಿ ಕಾಣಲು ಸಾಧ್ಯವಿಲ್ಲ ಎಂದು ಸಚಿವರು ತಿಳಿಸಿದರು. ತಳಮಟ್ಟದಲ್ಲಿ ಆರ್ಥಿಕ ಪ್ರಗತಿ ಸಾಧಿಸುವಲ್ಲಿ ಎಡಿಸಿ ಬ್ಯಾಂಕ್ ಮತ್ತು ಅಮುಲ್ ಸೇರಿದಂತೆ ವಿವಿಧ ಸಹಕಾರಿ ಸಂಘ ಸಂಸ್ಥೆಗಳ  ಕೊಡುಗೆ ಅಪಾರವಾದುದು ಎಂದು ಪ್ರಶಂಸಿದರು. ಮುಂಬರುವ ದಿನಗಳಲ್ಲಿ ಸಹಕಾರಿ ವಲಯದ ಪಾತ್ರ ಅತ್ಯಂತ ಮಹತ್ವದ್ದಾಗಿರಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು.  ಗೃಹ ಸಚಿವರು ತಮ್ಮ ತವರು ರಾಜ್ಯಕ್ಕೆ ಭೇಟಿ ನೀಡಿದ್ದು, ಹಲವಾರು ಕಾರ್ಯಕ್ರಮಗಳಲ್ಲಿ ಭಾಗಿಯಾಗಿದ್ದರು.

<><*<><>*><>

೨೦೨೩-೨೪ನೇ ಸಾಲಿನಲ್ಲಿ ದೇಶೀಯ ರಕ್ಷಣಾ ಉತ್ಪಾದನೆ ದಾಖಲೆ ಪ್ರಮಾಣದಲ್ಲಿ ಹೆಚ್ಚಾಗಿದ್ದು, ೧ ಲಕ್ಷದ ೨೭ ಸಾವಿರ ಕೋಟಿ ರೂಪಾಯಿಗಳಿಗೂ ಅಧಿಕವಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ಏರ್ಪಡಿಸಿದ್ದ ಭಾರತೀಯ ರಕ್ಷಣಾ ಉತ್ಪಾದಕರ ಸಂಸ್ಥೆಯ ಏಳನೇ ವಾರ್ಷಿಕ ಸರ್ವಸದಸ್ಯರ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ರಕ್ಷಣಾ ವಲಯದಲ್ಲಿ ಅಭಿವೃದ್ಧಿ ಸಾಧಿಸಲು ತಂತ್ರಜ್ಞಾನದ ಎಲ್ಲಾ ಆಯಾಮಗಳನ್ನು ಬಳಸಿಕೊಳ್ಳಲು ಹಲವು ಯೋಜನೆಗಳನ್ನು ಸರ್ಕಾರ ಜಾರಿಗೊಳಿಸಿದೆ ಎಂದರು. ಐಡೆಕ್ಸ್, ತಂತ್ರಜ್ಞಾನ ಅಭಿವೃದ್ಧಿ ನಿಧಿ, ಅಧಿತಿ ಯೋಜನೆ ಸೇರಿದಂತೆ  ಹಲವು ಉತ್ತೇಜನಕಾರಿ ಯೋಜನೆಗಳನ್ನು ಸಚಿವಾಲಯ ಜಾರಿಗೊಳಿಸಿದೆ ಎಂದು ಹೇಳಿದರು.

<><*<><>*><>

ದೇಶದಲ್ಲಿ ಉದ್ಯೋಗ, ಆರೋಗ್ಯ, ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಹೆಚ್ಚಿನ ಆದ್ಯತೆ ನೀಡಿದೆ ಎಂದು ಕೇಂದ್ರ ಹೆದ್ದಾರಿ ಮತ್ತು ಭೂ ಸಾರಿಗೆ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ಕರ್ನಾಟಕದ ಬೆಳಗಾವಿ ಜಿಲ್ಲೆಯ ನಿಪ್ಪಾಣಿಯಲ್ಲಿ ವಿದ್ಯಾ ಸಂವರ್ಧಕ ಮಂಡಳಿ, ನೂತನವಾಗಿ ನಿರ್ಮಿಸಿರುವ ಎಂ.ಬಿ.ಎ ಮತ್ತು ಎಮ್.ಸಿ.ಎ ವಿಭಾಗದ ಕಟ್ಟಡಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು. ಬೆಳಗಾವಿ ಬೈಪಾಸ್ ರಸ್ತೆ ನಿರ್ಮಾಣಕ್ಕೆ ೮೦೦ ಕೋಟಿ ರೂಪಾಯಿ ನೀಡಲಾಗುವುದು. ಗೋವಾ-ಹೈದರಾಬಾದ್ ರಸ್ತೆ ಅಭಿವೃದ್ಧಿಗೆ ಅನುದಾನ ಒದಗಿಸಲಾಗಿದೆ ಎಂದರು. ಕೇಂದ್ರ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಪ್ರಲ್ಹಾದ್ ಜೋಶಿ ಮಾತನಾಡಿ, ಎಥೆನಾಲ್ ಉತ್ಪಾದನಾ ಕ್ಷೇತ್ರದಲ್ಲಿ ೨೦೧೪ ರ ನಂತರ ದೇಶದಲ್ಲಿ ಬಹುದೊಡ್ಡ ಕ್ರಾಂತಿಯಾಗಿದೆ ಎಂದರು.

<><*<><>*><>

ತಿರುಮಲ ತಿರುಪತಿ ದೇವಸ್ಥಾನದಲ್ಲಿ ತಯಾರಿಸುವ ಪ್ರಸಾದ ಲಡ್ಡುವಿನಲ್ಲಿ ಕಲಬೆರಕೆ ತುಪ್ಪ ಬಳಸಲಾಗಿದೆ ಎಂಬ ಆರೋಪಗಳ ಬಗ್ಗೆ ತನಿಖೆ ನಡೆಸಲು ಸ್ವತಂತ್ರ ವಿಶೇಷ ತನಿಖಾ ತಂಡ-ಎಸ್‌ಐಟಿ ರಚನೆ ಮಾಡುವಂತೆ ಸುಪ್ರೀಂಕೋರ್ಟ್ ಆದೇಶ ನೀಡಿದೆ. ವಿಶೇಷ ತನಿಖಾ ತಂಡದಲ್ಲಿ ಇಬ್ಬರು ಸಿಬಿಐ ಅಧಿಕಾರಿಗಳು ಮತ್ತು ಆಂಧ್ರಪ್ರದೇಶದ ಇಬ್ಬರು ಪೊಲೀಸ್ ಅಧಿಕಾರಿಗಳು ಹಾಗೂ ಭಾರತದ ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಪ್ರಾಧಿಕಾರದ ಹಿರಿಯ ಅಧಿಕಾರಿಯೊಬ್ಬರು ಇರುತ್ತಾರೆ. ತನಿಖಾ ಕಾರ್ಯ ಸಿಬಿಐ ನಿರ್ದೇಶಕರ ಉಸ್ತುವಾರಿಯಲ್ಲಿ ನಡೆಯಲಿದೆ ಎಂದು ಸುಪ್ರೀಂಕೋರ್ಟ್ ತಿಳಿಸಿದೆ. ಈ ಪ್ರಕರಣ ಕುರಿತು ವಿವಿಧ ಅರ್ಜಿಗಳ ವಿಚಾರಣೆ ನಡೆಸಿದ ಸರ್ವೋನ್ನತ ನ್ಯಾಯಾಲಯ, ಈ ವಿಚಾರದಲ್ಲಿ ಕೇಳಿಬಂದಿರುವ ಆರೋಪಗಳ ಮತ್ತು ಪ್ರತ್ಯಾರೋಪಗಳ ಕುರಿತ ಅರ್ಹತೆಗಳ ಬಗ್ಗೆ ಪ್ರಸ್ತಾಪಿಸಿಲ್ಲ. ಆದರೆ, ನ್ಯಾಯಾಲಯದ ನಿರ್ಧಾರವನ್ನು ರಾಜಕೀಯ ಯುದ್ಧಭೂಮಿಯಾಗಿ ಬಳಕೆ ಮಾಡಿಕೊಳ್ಳಬಾರದು ಎಂದು ಹೇಳಿದೆ. ತಿರುಮಲ ತಿರುಪತಿ ದೇವಸ್ಥಾನದ ಕೋಟ್ಯಂತರ ಭಕ್ತರ ಭಾವನೆಗಳಿಗೆ ಧಕ್ಕೆಯಾಗಬಾರದು ಎಂಬ ಉದ್ದೇಶದಿಂದ ಈ ಆದೇಶವನ್ನು ಹೊರಡಿಸಲಾಗಿದೆ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಹಿರಿಯ ಬಿಜೆಪಿ ನಾಯಕ ಸುಬ್ರಮಣಿಯನ್‌ಸ್ವಾಮಿ,

ರಾಜ್ಯಸಭಾ ಸದಸ್ಯ ಹಾಗೂ ಟಿಟಿಡಿ ಮಾಜಿ ಅಧ್ಯಕ್ಷ ವೈ.ವಿ.ಸುಬ್ಬಾರೆಡ್ಡಿ, ಇತಿಹಾಸಕಾರ ವಿಕ್ರಮ್ ಸಂಪತ್ ಸೇರಿದಂತೆ ಹಲವರು ಸಲ್ಲಿಸಿದ್ದ ಅರ್ಜಿಗಳ ವಿಚಾರಣೆ ಸಂದರ್ಭದಲ್ಲಿ ನ್ಯಾಯಾಲಯ ಈ ಆದೇಶವನ್ನು ಹೊರಡಿಸಿದೆ.

**<><*<><>*><>**

'ಭಾರತ ಅಂತಾರಾಷ್ಟ್ರೀಯ ವಿಜ್ಞಾನ ಮೇಳ-೨೦೨೪', ಇದೇ ವರ್ಷದ ನವಂಬರ್ ೩೦ ರಿಂದ ಡಿಸೆಂಬರ್ ೩ರವರೆಗೆ ಅಸ್ಸಾಂನ ಗುವಾಹಟಿಯಲ್ಲಿ ನಡೆಯಲಿದೆ. ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳ ಮುಂಚೂಣಿ ವಲಯಗಳಲ್ಲಿ ಭಾರತದ ಸಾಧನೆಗಳನ್ನು ಬಿಂಬಿಸುವ ಉದ್ದೇಶದಿಂದ ಈ ಮೇಳವನ್ನು ಆಯೋಜಿಸಲಾಗಿದೆ. ಈ ಕುರಿತು ದೆಹಲಿಯಲ್ಲಿ ಸುದ್ದಿಗಾರರಿಗೆ ತಿಳಿಸಿದ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್, ಈ ವರ್ಷದ ಐಐಎಸ್‌ಎಫ್-೨೦೨೪ರ ಘೋಷವಾಕ್ಯ 'ವಿಜ್ಞಾನ ಮತ್ತು ತಂತ್ರಜ್ಞಾನ ಚಾಲಿತ ಜಾಗತಿಕ ತಯಾರಿಕಾ ಕೇಂದ್ರವಾಗಿ ಭಾರತದ ಪರಿವರ್ತನೆ' ಎಂಬುದಾಗಿದೆ ಎಂದು ತಿಳಿಸಿದರು.

**<><*<><>*><>**

ಶ್ರೀಲಂಕಾಗೆ ಒಂದು ದಿನದ ಭೇಟಿಗಾಗಿ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಕೊಲೊಂಬೊ ತಲುಪಿದ್ದಾರೆ. ಕೊಲೊಂಬೊ ತಲುಪಿದ ನಂತರ ಅವರು, ಸಾಮಾಜಿಕ ಮಾಧ್ಯಮದಲ್ಲಿ ಮಾಡಿರುವ ಪೋಸ್ಟ್‌ನಲ್ಲಿ ಶ್ರೀಲಂಕಾ ನಾಯಕತ್ವದೊಂದಿಗೆ ಹಲವು ವಿಚಾರಗಳಲ್ಲಿ ಚರ್ಚಿಸಲು ತಾವು ಉತ್ಸುಕರಾಗಿರುವುದಾಗಿ ತಿಳಿಸಿದ್ದಾರೆ. ಶ್ರೀಲಂಕಾದ ನೂತನ ಅಧ್ಯಕ್ಷರಾಗಿ ಎ.ಕೆ.ದಿಸ್ಸಾನಾಯಕೆ ಅಧಿಕಾರ ವಹಿಸಿಕೊಂಡ ನಂತರ ಈ ದೇಶಕ್ಕೆ ಭೇಟಿ ನೀಡುತ್ತಿರುವ ಮೊದಲ ವಿದೇಶಾಂಗ ಸಚಿವರು ಎಂಬ ಕೀರ್ತಿಗೆ ಡಾ.ಎಸ್.ಜೈಶಂಕರ್ ಪಾತ್ರರಾಗಿದ್ದಾರೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ಈ ಭೇಟಿ ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳ ವೃದ್ಧಿಗೆ ಸಹಕಾರಿಯಾಗಲಿದೆ ಮತ್ತು ಪರಸ್ಪರ ಪ್ರಯೋಜನ ಪಡೆಯಲು ಉಭಯ ದೇಶಗಳ ಪಾಲುದಾರಿಕೆಗೆ ಹೆಚ್ಚಿನ ಒತ್ತು ನೀಡಲು ನೆರವಾಗಲಿದೆ ಎಂದು ಹೇಳಲಾಗಿದೆ.

**<><*<><>*><>**

೯೦ ಸದಸ್ಯ ಬಲದ ಹರಿಯಾಣ ವಿಧಾನಸಭೆಗೆ ನಾಳೆ ಒಂದೇ ಹಂತದ ಚುನಾವಣೆ ನಡೆಯಲಿದ್ದು, ಮುಕ್ತ ಹಾಗೂ ನ್ಯಾಯ ಸಮ್ಮತ ಮತದಾನಕ್ಕೆ ಚುನಾವಣಾ ಆಯೋಗ ಸಕಲ ಸಿದ್ಧತೆ ಮಾಡಿಕೊಂಡಿದೆ. ೯೩೦ ಪುರುಷರು ಮತ್ತು ೧೦೧ ಮಹಿಳೆಯರು ಸೇರಿದಂತೆ ೧,೦೩೧ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಈ ಪೈಕಿ ೪೬೪ ಸ್ವತಂತ್ರ ಅಭ್ಯರ್ಥಿಗಳಿದ್ದಾರೆ ಎಂದು ಹರಿಯಾಣ ಮುಖ್ಯ ಚುನಾವಣಾಧಿಕಾರಿ ಪಂಕಜ್ ಅಗರ್ವಾಲ್ ಹೇಳಿದ್ದಾರೆ. ಮತದಾನ ಬೆಳಗ್ಗೆ ೭ ಗಂಟೆಗೆ ಆರಂಭವಾಗಲಿದ್ದು, ಸಂಜೆ ೬ ಗಂಟೆಗೆ ಮುಕ್ತಾಯವಾಗಲಿದೆ. ರಾಜ್ಯದಲ್ಲಿ ೨ ಕೋಟಿ ೩ ಲಕ್ಷದ ೫೪ ಸಾವಿರಕ್ಕೂ ಹೆಚ್ಚು ಅರ್ಹ ಮತದಾರರಿದ್ದಾರೆ. ಸುಗಮ ಚುನಾವಣೆ ನಡೆಸಲು ಒಟ್ಟು ೨೦ ಸಾವಿರದ ೬೩೨ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ.